# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1203
ಸದಸ್ಯರ ಹೆಸರು : ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 29.12.2022.
ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳಿಗೆ ಪ್ರಥಮ ದರ್ಜೆ ಸಹಾಯಕ ಮತ್ತು ಲೆಕ್ಕ ಅಧೀಕ್ಷಕರ ಹುದ್ದೆಗೆ ಮುಂಬಡ್ತಿ ನೀಡಲು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರುವ ಪ್ರಸ್ತಾವನೆ ಪ್ರಸ್ತುತ ಯಾವ ಹಂತದಲ್ಲಿದೆ; (ವಿವರ ನೀಡುವುದು) | ಸರ್ಕಾರದ ಪರಿಶೀಲನೆಯಲ್ಲಿದೆ. |
| (ಆ) | ದ್ವಿತೀಯ ದರ್ಜೆ ಲೆಕ್ಕ ಸಹಾಯಕರು ಮತ್ತು ಕಾರ್ಯದರ್ಶಿ ಗ್ರೇಡ್-2 ಹುದ್ದೆಗಳ ಜೇಷ್ಠತಾ ಪಟ್ಟಿಯನ್ನು ಏಕರೂಪ ಜೇಷ್ಠತಾ ಪಟ್ಟಿ ತಯಾರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವ ಹಂತದಲ್ಲಿದೆ; (ವಿವರ ನೀಡುವುದು) | ಹೌದು.<br><br>ಸರ್ಕಾರದ ಪರಿಶೀಲನೆಯಲ್ಲಿದೆ. |
| (ಇ) | ದ್ವಿತೀಯ ದರ್ಜೆ ಲೆಕ್ಕ ಸಹಾಯಕರನ್ನು ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ 28 ಅಧೀನ ಇಲಾಖೆಗಳಲ್ಲಿ ಇರುವ ಪ್ರಥಮ ದರ್ಜೆ ಸಹಾಯಕ ಮತ್ತು ಲೆಕ್ಕ ಅಧೀಕ್ಷಕರ ಹುದ್ದೆಗೆ ಮುಂಬಡ್ತಿ ನೀಡಲು ಪರಿಗಣಿಸಬಾರದೇಕೆ; | ಸರ್ಕಾರದ ಪರಿಶೀಲನೆಯಲ್ಲಿದೆ. |
| (ಈ) | ನೇರ ನೇಮಕಾತಿ ಕೋಟಾದಡಿ ಖಾಲಿಯಿರುವ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಹುದ್ದೆಗಳಿಗೆ ಗ್ರಾಮ ಪಂಚಾಯಿತಿ ಕಾರ್ಯದರ್ಶಿ (ಗ್ರೇಡ್-2) ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳ ಹುದ್ದೆಗಳಿಂದ ಮುಂಬಡ್ತಿ ನೀಡಲು ಯಾವ ಜಿಲ್ಲೆಗಳಿಗೆ ಮಾತ್ರ ಅನುಮತಿಸಲಾಗಿದೆ; (ವಿವರ ಹಾಗೂ ಆದೇಶ ಪ್ರತಿ ನೀಡುವುದು) | ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 79 ಜಿಪಿಕೆ 2022, ದಿನಾಂಕ:16.05.2022 ರಲ್ಲಿ ಉಡುಪಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ 15 ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಹುದ್ದೆಗಳನ್ನು ಆಡಳಿತಾತ್ಮಕ ಹಿತದೃಷ್ಟಿಯಿಂದ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೇನೆನಿ 2021, ದಿನಾಂಕ:10.12.2021 ರ ಮಾರ್ಗಸೂಚಿಗಳನ್ನು ಅನುಸರಿಸಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕಸಹಾಯಕರುಗಳಿಗೆ ಜೇಷ್ಠತೆ ಮತ್ತು 33 |

| | | |
|---|---|---|
| | | ರೋಸ್ಟರ್ ಬಿಂದುಗಳ ಪಾಲಿಸಿಕೊಂಡು ಅರ್ಹತೆ ಆಧಾರದ ಮೇಲೆ ನಿಯಮಾನುಸಾರ ಭರ್ತಿ ಮಾಡಲು ಕ್ರಮಕೈಗೊಳ್ಳುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಉಡುಪಿರವರಿಗೆ ತಿಳಿಸಲಾಗಿತ್ತು.<br>ಪತ್ರದ ಪ್ರತಿಯನ್ನು ಅನುಬಂಧ-1ರಲ್ಲಿ ನೀಡಿದೆ. |
| (ಉ) | ಇಡೀ ರಾಜ್ಯಕ್ಕೆ ಅನ್ವಯಿಸಬಹುದಾದ ಆದೇಶವನ್ನು ಕೆಲವೇ ಕೆಲವು ಜಿಲ್ಲೆಗಳಿಗೆ ಮಾತ್ರ ಸೀಮಿತಗೊಳಿಸಿ ಆದೇಶ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರೀತಿ ಆದೇಶ ಹೊರಡಿಸಲು ಕಾರಣಗಳೇನು; | ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 79 ಜಿಪಿಕೆ 2022, ದಿನಾಂಕ:16.05.2022 ರ ಸ್ಪಷ್ಟೀಕರಣವನ್ನು ಸರಿಯಾಗಿ ಅರ್ಥೈಸಿಕೊಳ್ಳದೇ ಉಪ ಕಾರ್ಯದರ್ಶಿ, ಉಡುಪಿ ಜಿಲ್ಲಾ ಪಂಚಾಯಿತಿರವರು ಉಡುಪಿ ಜಿಲ್ಲಾ ಪಂಚಾಯತಿ ಕಛೇರಿಯ ದಿನಾಂಕ:24.05.2022 ರ ಆದೇಶದಲ್ಲಿ ನೇರ ನೇಮಕಾತಿ ಕೋಟಾದ ಹುದ್ದೆಗಳನ್ನು ಮುಂಬಡ್ತಿ ಮೂಲಕ ತುಂಬಿರುವುದು ಕಂಡುಬಂದಿದ್ದು, ದಿನಾಂಕ:24.05.2022 ರಂದು ಉಪಕಾರ್ಯದರ್ಶಿಯವರ ಮುಂಬಡ್ತಿ ಆದೇಶವನ್ನು ಹೊರಡಿಸಿರುವ ಕ್ರಮವು ಸಮಜಂಸವಾಗಿರುವುದಿಲ್ಲ. ಈ ಬಗ್ಗೆ ಮತ್ತೊಮ್ಮೆ ಪುನರ್ ಪರಿಶೀಲಿಸಿ, ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೆನೆನಿ 2021, ದಿನಾಂಕ:10.12.2021 ರ ಮಾರ್ಗಸೂಚಿಗಳನ್ವಯ ನಿಯಮಾನುಸಾರ ಪರಿಶೀಲಿಸಿ, ಸೂಕ್ತ ಕ್ರಮ ವಹಿಸುವಂತೆ ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 79 ಜಿಪಿಕೆ 2022, ದಿನಾಂಕ:02.07.2022 ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಉಡುಪಿರವರಿಗೆ ತಿಳಿಸಲಾಗಿದೆ.<br><br>ಪ್ರತಿಯನ್ನು ಅನುಬಂಧ-2 ರಲ್ಲಿ ನೀಡಿದೆ. |
| (ಊ) | ಬಂದಿದ್ದಲ್ಲಿ, ಉಳಿದ ಜಿಲ್ಲೆಗಳಲ್ಲೂ ನೇರ ನೇಮಕಾತಿ ಕೋಟಾದಡಿ ಖಾಲಿಯಿರುವ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಹುದ್ದೆಗಳಿಗೆ ಕಾರ್ಯದರ್ಶಿ ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳ ಹುದ್ದೆಗಳಿಂದ ಮುಂಬಡ್ತಿ ನೀಡಲು ಯಾವಾಗ ಆದೇಶ ಹೊರಡಿಸಲಾಗುವುದು? | ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 61 ಗ್ರಾಪಂಸಿ 2020 (ಭಾಗ-1), ದಿನಾಂಕ: 28.03.2022 ರಲ್ಲಿ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೆನೆನಿ 2021, ದಿನಾಂಕ:10.12.2021 ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳನ್ನು ಭರ್ತಿ ಮಾಡುವಾಗ ರಿಕ್ತ ಸ್ಥಾನ ಆಧಾರಿತ ವರ್ಗೀಕರಣದ ಬದಲಾಗಿ ಹುದ್ದೆ ಆಧಾರಿತ ವರ್ಗೀಕರಣವನ್ನು ಅನುಸರಿಸುವ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಲಾಗಿದೆ. ಅದರಂತೆ, ನೇರ ನೇಮಕಾತಿ ಕೋಟಾದ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಮತ್ತು ಮುಂಬಡ್ತಿ ಕೋಟಾದ ಹುದ್ದೆಗಳನ್ನು ಮುಂಬಡ್ತಿ ಮೂಲಕ ಭರ್ತಿ ಮಾಡಬೇಕಾಗಿರುತ್ತದೆ.<br><br>ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದ |

| | | |
|---|---|---|
| | | ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಮುಂಬಡ್ತಿ ಕೋಟಾದಲ್ಲಿ ಖಾಲಿ ಇರುವ ಹುದ್ದೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ 33 ರೋಸ್ಟರ್ ಬಿಂದುಗಳನ್ನು ಅಳವಡಿಸಿಕೊಂಡು ಅರ್ಹ ನೌಕರರಿಂದ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ನೀಡಲು ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.<br>ಪತ್ರದ ಪ್ರತಿಯನ್ನು ಅನುಬಂಧ-3 ರಲ್ಲಿ ನೀಡಿದೆ. |

ಸಂ. ಗ್ರಾಅಪ 383 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ

ವಿಧಾನ ಪರಿಷತ್ತಿನ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1203ಕ್ಕೆ



ಅನುಬಂಧ - 1

**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ 79 ಜಿಪಿಕೆ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:16.05.2022.

**ಇಂದ:**
ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

**ಇವರಿಗೆ:**
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯಿತಿ,
ಉಡುಪಿ ಜಿಲ್ಲೆ.

**ಮಾನ್ಯರೆ,**

**ವಿಷಯ:** ಉಡುಪಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಖಾಲಿ ಇರುವ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಹುದ್ದೆಗೆ ಮುಂಬಡ್ತಿ ನೀಡುವ ಬಗ್ಗೆ.

**ಉಲ್ಲೇಖ:** 1) ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರಿ ಹಾಗೂ ಉಪಕಾರ್ಯದರ್ಶಿ ಜಿಲ್ಲಾ ಪಂಚಾಯಿತಿ ಉಡುಪಿ ಜಿಲ್ಲೆ ಇವರ ಪತ್ರ ಸಂಖ್ಯೆ: ಉಜಿಪಂ:ಆಡಳಿತ:ಸಿಆರ್:ಎ2:ಇ-86538:2022-23 ದಿನಾಂಕ:04.05.2022.
2) ಸರ್ಕಾರದ ಅಧಿಕೃತ ಜ್ಞಾಪನ ಸಂ:ಸಿಆಸುಇ 106 ಸೇನೇನಿ 2021, ದಿನಾಂಕ:10.12.2021
3) ಸರ್ಕಾರದ ಪತ್ರ ಸಂ:ಗ್ರಾಅಪ 61 ಗ್ರಾಪಂಸಿ 2020(ಭಾಗ-1), ದಿನಾಂಕ:28.03.2022

8715

*****

ಮೇಲ್ಕಂಡ ವಿಷಯ ಸಂಬಂಧಿಸಿದಂತೆ, ಉಲ್ಲೇಖಿತ(1) ರ ಪ್ರಸ್ತಾವನೆಯನ್ನು ಪರಿಶೀಲಿಸಿದೆ., ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳನ್ನು ಭರ್ತಿ ಮಾಡುವಾಗ ರಿಕ್ತಸ್ಥಾನ ಆಧಾರಿತ ವರ್ಗೀಕರಣದ ಬದಲಾಗಿ ಹುದ್ದೆ ಆಧಾರಿತ ವರ್ಗೀಕರಣವನ್ನು ಅನುಸರಿಸುವ ಬಗ್ಗೆ ಉಲ್ಲೇಖಿತ(2) ಮತ್ತು (3) ರಲ್ಲಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.

ಆದುದರಿಂದ ಉಡುಪಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ 15 ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಹುದ್ದೆಗಳನ್ನು ಆಡಳಿತಾತ್ಮಕ ಹಿತದೃಷ್ಟಿಯಿಂದ ಉಲ್ಲೇಖಿತ(1) ಮತ್ತು(2) ರಲ್ಲಿನ ಮಾರ್ಗಸೂಚಿಗಳನ್ನು ಅನುಸರಿಸಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ಹಾಗೂ ದ್ವಿತೀಯ ದರ್ಜೆ ಲೆಕ್ಕಸಹಾಯಕರುಗಳ ಹುದ್ದೆಗಳಿಗೆ ಜೇಷ್ಠತೆ ಮತ್ತು 33 ಬಿಂದುಗಳ ರೋಷ್ಟರ್ ಪಾಲಿಸಿಕೊಂಡು ,ಅರ್ಹತೆ ಆಧಾರದ ಮೇಲೆ ನಿಯಮಾನುಸಾರ ಭರ್ತಿ ಮಾಡಲು ಕ್ರಮ ಕೈಗೊಳ್ಳುವಂತೆ ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,
16/5/22

**(ಎಂ.ಎಂ.ರಾಜು)**
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ(ಜಿ.ಪಂ)

ವಿಧಾನ ಪರಿಷತ್ತಿನ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ - 1203 ಕ್ಕೆ 4

ಅನುಬಂಧ - 2

**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ 79 ಜಿಪಿಕೆ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:02.07.2022.

**ಇಂದ:**

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

**ಇವರಿಗೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯಿತಿ,
ಉಡುಪಿ ಜಿಲ್ಲೆ.

**ಮಾನ್ಯರೆ,**

**ವಿಷಯ:** ಉಡುಪಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಗ್ರಾಮ ಪಂಚಾಯತಿ ಕಾರ್ಯದರ್ಶಿ ಹುದ್ದೆಗೆ ಮುಂಬಡ್ತಿ ನೀಡುವ ಸಂಬಂಧ ಸ್ಪಷ್ಟೀಕರಣ ನೀಡುವ ಬಗ್ಗೆ.

**ಉಲ್ಲೇಖ:**
1. ನಿಮ್ಮ ಪತ್ರ ಸಂ:ಉಜಿಪಂ:ಆಡಳಿತ/ಸಿಆರ್ ಎ2ಇ-86538 2022-23, ದಿನಾಂಕ:04.05.2022.
2. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೇನೆನಿ 2020, ದಿನಾಂಕ:10.12.2021.
3. ಇದೇ ಸಮಸಂಖ್ಯೆಯ ಪತ್ರ ದಿನಾಂಕ:16.05.2022
4. ನೇಮಕಾತಿ ಪ್ರಾಧಿಕಾರಿ ಹಾಗೂ ಉಪಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ, ಉಡುಪಿ ಜಿಲ್ಲೆ ಇವರ ಆದೇಶ ಸಂ:ಜಿಪಂಉ/ಆಡಳಿತ/ಸಿಆರ್86538/2022-23/ಎ2, ದಿನಾಂಕ:24.05.2022.

ಗ್ರಾಮೀಣಾಭಿವೃದ್ಧಿ ಮತ್ತು ಪಂ ರಾಜ್ ... 8/6/7 ದಿನಾಂಕ

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ-1ರ ತಮ್ಮ ಪ್ರಸ್ತಾವನೆಯನ್ನು ಪರಿಶೀಲಿಸಿ, ಉಲ್ಲೇಖ-3ರ ಸರ್ಕಾರದ ಪತ್ರದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಅಧಿಕೃತ ಜ್ಞಾಪನ ದಿನಾಂಕ:10.12.2021 ರ ಅನುಸಾರ ರಿಕ್ತ ಸ್ಥಾನಗಳ ಹುದ್ದೆ ಆಧಾರದ ಮೇಲೆ ಗುರುತಿಸಲು ಅಂದರೆ ನೇರ ನೇಮಕಾತಿ ಹುದ್ದೆಗಳನ್ನು ನೇರ ನೇಮಕಾತಿಗಾಗಿ ಹಾಗೂ ಬಡ್ತಿ ಮೂಲಕ ಹುದ್ದೆಗಳನ್ನು ಬಡ್ತಿ ಮೂಲಕವು ತುಂಬುವ ಬಗ್ಗೆ ಹುದ್ದೆಗಳನ್ನು ಗುರುತಿಸಲು ಮತ್ತು ಬಡ್ತಿ ಮೂಲಕ ತುಂಬಬೇಕಾದ ಹುದ್ದೆಗಳು ಖಾಲಿ ಇದ್ದಲ್ಲಿ ಅವುಗಳನ್ನು ಮೇಲಿನ ಅಧಿಕೃತ ಜ್ಞಾಪನದಂತೆ ಕ್ರಮಬದ್ಧವಾಗಿ ಗುರುತಿಸಿ ಅಂತಹ ಹುದ್ದೆಗಳಿಗೆ ಮಾತ್ರ ಬಡ್ತಿ ನೀಡಲು ದಿನಾಂಕ:16.05.2022 ರ ಪತ್ರದಲ್ಲಿ ತಮಗೆ ತಿಳಿಸಲಾಗಿದೆ. ಸದರಿ ಸ್ಪಷ್ಟೀಕರಣವನ್ನು ಸರಿಯಾಗಿ ಅರ್ಥೈಸಿಕೊಳ್ಳದೇ ಉಪ ಕಾರ್ಯದರ್ಶಿ, ಉಡುಪಿ ಜಿಲ್ಲಾ ಪಂಚಾಯಿತಿ ರವರು ನೇರ ನೇಮಕಾತಿ ಕೋಟಾದ ಹುದ್ದೆಗಳನ್ನು ಮುಂಬಡ್ತಿ ಮೂಲಕ ತುಂಬಿರುವುದು ಕಂಡುಬಂದಿರುತ್ತದೆ.

ಆದುದರಿಂದ, ದಿನಾಂಕ:24.05.2022 ರಂದು ಉಪ ಕಾರ್ಯದರ್ಶಿಯವರ ಬಡ್ತಿ ನಡವಳಿಯನ್ನು ಹೊರಡಿಸಲಾದ ಕ್ರಮವು ಸಮಂಜಸವಾಗಿರುವುದಿಲ್ಲ. ಈ ಬಗ್ಗೆ ಮತ್ತೊಮ್ಮೆ ಪುನರ್ ಪರಿಶೀಲಿಸಿ ಸರ್ಕಾರದ ಅಧಿಕೃತ ಜ್ಞಾಪನ ಸಂ:ಸಿಆಸುಇ 106 ಸೇನೇನಿ 2021, ದಿನಾಂಕ:10.12.2021 ರಲ್ಲಿ ನೀಡಿರುವ ಮಾರ್ಗಸೂಚಿಗಳನ್ವಯ ನಿಯಮಾನುಸಾರ ಪರಿಶೀಲಿಸಿ ಸೂಕ್ತ ಕ್ರಮ ವಹಿಸುವಂತೆ ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

B. Naveenkumar 02/07/22
(ನವೀನ್ ಕುಮಾರ್ ಬಿ.)

ವಿಧಾನ ಪರಿಷತ್ತಿನ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ - 1203 ಕ್ಕೆ 5

ಅನುಬಂಧ-3 (6)

**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 61 ಗ್ರಾಪಂಸಿ 2020 (ಭಾಗ-1)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:28-03-2022.

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

**ಇವರಿಗೆ:**

1) ಆಯುಕ್ತರು,
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಹಳೆ ಕಟ್ಟಡ ಕಛೇರಿ,
ಕೆ.ಜಿ.ರಸ್ತೆ, ಬೆಂಗಳೂರು.

2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳು.

3) ಉಪಕಾರ್ಯದರ್ಶಿ (ಅಭಿವೃದ್ಧಿ)
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳು.

ಮಾನ್ಯರೆ,

**ವಿಷಯ:** ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿ ಹುದ್ದೆಯಿಂದ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಮತ್ತು ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಯಿಂದ ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿ ಹುದ್ದೆಗೆ ಪದೋನ್ನತಿ ನೀಡುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 306 ಕೆಎಸ್‌ಎಸ್ 2005, ದಿನಾಂಕ:20-01-2011.
2. ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 299 ಪಬವ 2013, ದಿನಾಂಕ: 20-02-2014.
3. ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 313 ಗ್ರಾಪಂಕಾ 2013 ದಿನಾಂಕ:17-09-2014.
4. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೇನೆನಿ 2021 ದಿನಾಂಕ:10-12-2021.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ (1), (2) ಮತ್ತು (3) ರ ಅಧಿಸೂಚನೆಯಲ್ಲಿ ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) ನಿಯಮಗಳು, 2008 ಮತ್ತು ತಿದ್ದುಪಡಿ ನಿಯಮಗಳಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದಕ್ಕೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸಿ, ನೇರ ನೇಮಕಾತಿ ಮತ್ತು ಮುಂಬಡ್ತಿ ಮೂಲಕ ಭರ್ತಿ ಮಾಡಲು ನೇಮಕಾತಿ ನಿರ್ದಿಷ್ಟಪಡಿಸಲಾಗಿದೆ.

ಉಲ್ಲೇಖಿತ (4) ರ ಸರ್ಕಾರದ ಅಧಿಕೃತ ಜ್ಞಾಪನದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳನ್ನು ಭರ್ತಿ ಮಾಡುವಾಗ ರಿಕ್ತಸ್ಥಾನ ಆಧಾರಿತ ವರ್ಗೀಕರಣದ ಬದಲಾಗಿ ಹುದ್ದೆ ಆಧಾರಿತ ವರ್ಗೀಕರಣವನ್ನು ಅನುಸರಿಸುವ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.

ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬುವ ಬಗ್ಗೆ ಕರ್ನಾಟಕ ವಿಧಾನ ಮಂಡಲದ ಅಧಿವೇಶನದಲ್ಲಿ ಚುಕ್ಕೆ ಗುರುತಿನ / ಚುಕ್ಕೆ ಗುರುತಿಲ್ಲದ ಪ್ರಶ್ನೆಗಳು ಮತ್ತು ಗಮನ ಸೆಳೆಯುವ ಸೂಚನೆಗಳು ದಾಖಲಾಗುತ್ತಿರುತ್ತವೆ. ಗ್ರಾಮ ಪಂಚಾಯತಿಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆ / ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಮತ್ತು ಗ್ರಾಮ ಪಂಚಾಯತಿಯ ದಿನನಿತ್ಯದ ಕಾರ್ಯನಿರ್ವಹಣೆಗಾಗಿ ಮತ್ತು ನಾಗರೀಕರಿಗೆ ಸೇವೆಗಳನ್ನು ಸಕಾಲದಲ್ಲಿ ಒದಗಿಸಲು ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಅವಶ್ಯಕತೆ ಇರುತ್ತದೆ.

ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದಕ್ಕೆ ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿ (ಅಭಿವೃದ್ಧಿ) ರವರು ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರವಾಗಿರುತ್ತಾರೆ. ಆದುದರಿಂದ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಮುಂಬಡ್ತಿ ಕೋಟಾದಲ್ಲಿ ಖಾಲಿ ಇರುವ ಹುದ್ದೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳನ್ನು ಭರ್ತಿ ಮಾಡುವಾಗ ರಿಕ್ತಸ್ಥಾನ ಆಧಾರಿತ ವರ್ಗೀಕರಣದ ಬದಲಾಗಿ ಹುದ್ದೆ ಆಧಾರಿತ ವರ್ಗೀಕರಣವನ್ನು ಅನುಸರಿಸುವ ಬಗ್ಗೆ ಮಾರ್ಗಸೂಚಿಗಳು ಮತ್ತು 33 ಬಿಂದುಗಳ ರೋಸ್ಟರ್ ಪಾಲಿಸಿಕೊಂಡು ಅರ್ಹ ನೌಕರರಿಂದ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ನೀಡಲು ಕ್ರಮ ವಹಿಸುವಂತೆ ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

M. M. Raju 28/3/22

(ಎಂ.ಎಂ.ರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

28/3/22

O/C